# <u>ಮಂಗಳೂರು ವಿಶ್ವವಿದ್ಯಾನಿಲಯ</u>

**ದಿನಾಂಕ 29.06.2026 ರಂದು ಪೂರ್ವಾಹ್ನ 11.00 ಗಂಟೆಗೆ ಸರಿಯಾಗಿ ಆನ್‌ಲೈನ್ ಮೂಲಕ ನಡೆದ ಶೈಕ್ಷಣಿಕ ಮಂಡಳಿಯ 2026-27ನೇ ಸಾಲಿನ ಪ್ರಥಮ ಸಾಮಾನ್ಯ ಸಭೆಯ ನಡವಳಿಗಳು.**

**ಉಪಸ್ಥಿತರು**

**ಅನುಪಸ್ಥಿತರು**

## <u>ಪ್ರಾರಂಭಿಕ</u>

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾ ನ್ಯ ಕುಲಪತಿಗಳನ್ನು , ಎಲ್ಲಾ ನಿಕಾಯಗಳ ಡೀನರನ್ನು, ಸ್ನಾತಕೋತ್ತರ ವಿಭಾಗಗಳ ಅಧ್ಯಕ್ಷರುಗಳನ್ನು ಹಾಗೂ ಆನ್ಲೈನ್ ನಲ್ಲಿ ಭಾಗವಹಿಸಿರುವ ಎಲ್ಲಾ ಸದಸ್ಯರುಗಳನ್ನು, ಮಾಧ್ಯಮ ಪ್ರತಿನಿಧಿಗಳನ್ನು ಮತ್ತು ಸಭೆಯಲ್ಲಿ ಹಾಜರಿರುವ ಎಲ್ಲಾ ಅಧಿಕಾರಿಗಳನ್ನು ಹಾಗೂ ಆಡಳಿತ ಸಿಬ್ಬಂದಿ ಯನ್ನು ಸಭೆಗೆ ಸ್ವಾಗತಿಸಿ , ಸಭಾಧ್ಯಕ್ಷರಲ್ಲಿ ಸಭೆಯನ್ನು ಮುಂದುವರಿಸುವಂತೆ ಕೋರಿದರು. ಮಾನ್ಯ ಕುಲಪತಿಯವರು ಮತ್ತೊಮ್ಮೆ ಎಲ್ಲರನ್ನೂ ಸಭೆಗೆ ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

## <u>ಸ್ವಾಗತ</u>

- ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(viii)ರ ಪ್ರಕಾರ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರ ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ಶೈಕ್ಷಣಿಕ ಮಂಡಳಿ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವ **ಪ್ರೊ. ಜಗದೀಶ್ ಪ್ರಸಾದ್,** ಹಿರಿಯ ಪ್ರಾಧ್ಯಾಪಕರು , ರಸಾಯನಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರನ್ನು ಹಾಗೂ

- ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(vi) ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವ **ಡಾ. ಸೀಮಾ ಎಸ್. ಶೆಣೈ,** ನಿರ್ದೇಶಕರು, ಎಸ್.ಡಿ.ಎಂ. ಪೋಸ್ಟ್ ಗ್ರಾಜುಯೇಟ್ ಸೆಂಟರ್ ಫಾರ್

ಮ್ಯಾನೇಜ್ಮೆಂಟ್ ಸ್ಟಡೀಸ್ ಅಂಡ್ ರೀಸರ್ಚ್ , ಮಂಗಳೂರು. ಇವರುಗಳನ್ನು ಶೈಕ್ಷಣಿಕ ಮಂಡಳಿ ಸಭೆಗೆ ಸ್ವಾಗತಿಸಲಾಯಿತು.

## ಕೃತಜ್ಞತೆ

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(viii)ರ ಪ್ರಕಾರ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರ ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ಶೈಕ್ಷಣಿಕ ಮಂಡಳಿ ಸದಸ್ಯರಾಗಿ ನಾಮನಿರ್ದೇಶನಗೊಂಡಿದ್ದ **ಪ್ರೊ. ಜಯರಾಜ್ ಅಮೀನ್ .,** ಹಿರಿಯ ಪ್ರಾಧ್ಯಾಪಕರು , ಸ್ನಾತಕೋತ್ತರ ರಾಜ್ಯಶಾಸ್ತ್ರ ಅಧ್ಯಯನ ವಿಭಾಗ , ಮಂಗಳೂರು ವಿಶ್ವವಿದ್ಯಾನಿ ಲಯ ಇವರು ವಯೋನಿವೃತ್ತಿ ಹೊಂದಿರುವುದರಿಂದ ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿ ಲಯದ ಅಧಿನಿಯಮ 2000ದ ಪ್ರಕರಣ 30(1)(vi) ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಸದಸ್ಯರಾಗಿ ನಾಮನಿರ್ದೇಶನಗೊಂಡಿದ್ದ **ಶ್ರೀಮತಿ ಸುಚೆತ್ರಾ , ಪ್ರಾಂಶುಪಾಲರು, ಮೇಧಾ ಕಾಲೇಜು , ನೆಹರು ನಗರ , ಪುತ್ತೂರು** ಇವರ ಸದಸ್ಯತ್ವದ ಅವಧಿಯು ಕೊನೆಗೊಂಡಿರುವುದರಿಂದ ಸದರಿಯವರನ್ನು ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ .

ಹಾಗೂ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 30(1)(X) ರಂತೆ ಹಾಗೂ ವಿದ್ಯಾರ್ಥಿ ಪ್ರತಿನಿಧಿಗಳನ್ನು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ನಾಮ ನಿರ್ದೇಶನ ಮಾಡುವ ಪರಿನಿಯಮದ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ನಾಮನಿರ್ದೇಶನಗೊಂಡಿದ್ದ **ಶ್ರೀ ಹೃಷಿಕೇಶ್,** ತೃತೀಯ ಬಿ.ಬಿ.ಎ., ಎಸ್.ಡಿ.ಎಂ. ಕಾಲೇಜ್ ಆಫ್ ಬಿಸಿನೆಸ್ ಮ್ಯಾನೇಜ್ಮೆಂಟ್, ಮಂಗಳೂರು, **ಶ್ರೀ ಸಂಜಯ್ ಎಂ. ಶೆಟ್ಟಿ,** ತೃತೀಯ ಬಿ.ಸಿ.ಎ., ಕೆನರಾ ವಿಕಾಸ್ ಪ್ರಥಮ ದರ್ಜೆ ಕಾಲೇಜು, ವಿಮಾನ ನಿಲ್ದಾಣ ರಸ್ತೆ, ಮೇರಿಹಿಲ್, ಮಂಗಳೂರು ಮತ್ತು **ಶ್ರೀ ನಿಹಾರ್ ಎನ್.ಗಾವ್ಕರ್**, ದ್ವಿತೀಯ ಎಂ .ಎಸ್ಸಿ. ಸ್ನಾತಕೋತ್ತರ ಸಸ್ಯಶಾಸ್ತ್ರ ವಿಭಾಗ , ಮಂಗಳೂರು ವಿಶ್ವವಿದ್ಯಾನಿಲಯ , ಮಂಗಳಗಂಗೋತ್ರಿ ಇವರುಗಳ ಶೈಕ್ಷಣಿಕ ವ್ಯಾಸಂಗದ ಅವಧಿಯು ಮು ಕ್ತಾಯಗೊಂಡಿರುವುದರಿಂದ ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

ಇವರೆಲ್ಲರೂ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ನೀಡಿದ ಪೂರಕ ಸಲಹೆ ಮತ್ತು ಸಹಕಾರಗಳನ್ನು ಸ್ಮರಿಸಿ ಸದರಿಯವರಿಗೆ ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿ ಯ ಪರವಾಗಿ ಕೃ ತಜ್ಞತಾಪೂರ್ವಕ ವಂದನೆಗಳನ್ನು ಸಲ್ಲಿಸಲಾಯಿತು.

## ಪ್ರಾಸ್ತಾವಿಕ

ಈ ಕೆಳಕಂಡ ವಿಷಯಗಳನ್ನು ಸಭೆಯ ಗಮನಕ್ಕೆ ತರಲಾಯಿತು.

- ಮಂಗಳೂರು ವಿಶ್ವವಿದ್ಯಾನಿಲಯದ ಈ ಕೆಳಕಂಡ ಪ್ರಾಧ್ಯಾಪಕರು **TOP 5% SCIENTISTS WORLD WIDE GLOBAL SCIENTISTS INDEX 2025** ನಲ್ಲಿ ಸ್ಥಾನ ಪಡೆದಿರುವ ಮಾಹಿತಿಯನ್ನು ಕುಲಸಚಿವರು ಸಭೆಯ ಗಮನಕ್ಕೆ ತಂದರು.

1. ಪ್ರೊ. ಬೋಜ ಪೂಜಾರಿ, ಹಿರಿಯ ಪ್ರಾಧ್ಯಾಪಕರು, ಸ್ನಾತಕೋತ್ತರ ರಸಾಯನಶಾಸ್ತ್ರ ವಿಭಾಗ.
2. ಪ್ರೊ. ಕರುಣಾಕರ ಎನ್.., ಹಿರಿಯ ಪ್ರಾಧ್ಯಾಪಕರು, USIC, ಮಂಗಳೂರು ವಿಶ್ವವಿದ್ಯಾನಿಲಯ
3. ಪ್ರೊ. ವಿಶಾಲಾಕ್ಷಿ ಬಿ., ನಿವೃತ್ತ ಹಿರಿಯ ಪ್ರಾಧ್ಯಾಪಕರು, ಸ್ನಾತಕೋತ್ತರ ರಸಾಯನಶಾಸ್ತ್ರ ವಿಭಾಗ.
4. ಪ್ರೊ. ಬಿ.ಕೆ. ಸರೋಜಿನಿ, ನಿವೃತ್ತ ಹಿರಿಯ ಪ್ರಾಧ್ಯಾಪಕರು, ಸ್ನಾತಕೋತ್ತರ ಕೈಗಾರಿಕಾ ರಸಾಯನಶಾಸ್ತ್ರ ವಿಭಾಗ.

- ಹಾಗೆಯೇ Research.com ನಡೆಸಿದ ಅಧ್ಯಯನದ ಪ್ರಕಾರ ಕಳೆದ ಕೆಲವು ವರ್ಷಗಳಿಂದ ಸ್ಟ್ಯಾನ್ ಫೋರ್ಡ್ ವಿಶ್ವವಿದ್ಯಾನಿಲಯ TOP 2% SCIENTISTS WORLD OVER ಆಗಿ ಈ ಕೆಳಕಂಡವರು ಗುರುತಿಸಲ್ಪಟ್ಟಿರುತ್ತಾರೆ.

1. ಪ್ರೊ. ಕೆ.ಆರ್. ಶ್ರೀಧರ್, ಎಮಿರೆಟಸ್ ಪ್ರೊಫೇಸರ್, ಮಂಗಳೂರು ವಿಶ್ವವಿದ್ಯಾನಿಲಯದ ಜೀವವಿಜ್ಞಾನ ವಿಭಾಗದ ನಿವೃತ್ತ ಪ್ರಾಧ್ಯಾಪಕರು.
2. ಡಾ. ಜೆ.ಜಿ. ಮಂಜುನಾಥ, ಸಹ ಪ್ರಾಧ್ಯಾಪಕರು, ರಸಾಯನಶಾಸ್ತ್ರ ವಿಭಾಗ, ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜು, ಕೊಡಗು ವಿಶ್ವವಿದ್ಯಾನಿಲಯ (ಮಂಗಳೂರು ವಿಶ್ವವಿದ್ಯಾನಿಲಯದ ಹಿಂದಿನ ಘಟಕ ಕಾಲೇಜು)

ಇವರೆಲ್ಲರ ಅತ್ಯಮೋಘ ಸಾಧನೆಗೆ ಮೆಚ್ಚಿಗೆಯನ್ನು ವ್ಯಕ್ತಪಡಿಸಿ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಯ ಸಭೆಯಲ್ಲಿ ಪ್ರಶಂಶಿಸಲಾಯಿತು.

1. ಪದವಿ ತರಗತಿಗಳ ಸೆಮಿಸ್ಟರ್ ಪರೀಕ್ಷೆಗಳು ಪೂರ್ಣಗೊಂಡಿದ್ದು, ಮೌಲ್ಯಮಾಪನ ಕಾರ್ಯಕ್ಕೆ ಸಿದ್ಧತೆ ಮಾಡಿಕೊಳ್ಳಲಾಗಿದೆ. ವಿದ್ಯಾರ್ಥಿಗಳಿಗೆ ಸ್ನಾತಕೋತ್ತರ ಪದವಿ ಕಾರ್ಯಕ್ರಮಗಳಿಗೆ ಸೇರ್ಪಡೆಗೊಳ್ಳಲು ಅನುಕೂಲವಾಗುವಂತೆ ಆದಷ್ಟು ಶೀಘ್ರವಾಗಿ ಫಲಿತಾಂಶವನ್ನು ಪ್ರಕಟಿಸಲು ಕ್ರಮ ಜರುಗಿಸಲಾಗಿದೆ. ಈ ಕಾರ್ಯದ ಹಿಂದಿರುವ ಎಲ್ಲಾ ಅಧಿಕಾರಿಗಳ, ಶಿಕ್ಷಕ ಹಾಗೂ ಆಡಳಿತ ಸಿಬ್ಬಂದಿಗಳ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಲಾಯಿತು.

**I. ದಿನಾಂಕ 31.03.2026 ರಂದು ನಡೆದ ಶೈಕ್ಷಣಿಕ ಮಂಡಳಿಯ 2025-26ನೇ ಸಾಲಿ ನ ಚತುರ್ಥ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.**

- ದೃಢೀಕರಿಸಲಾಯಿತು -

**II. ಘನತೆವೆತ್ತ ಕುಲಾಧಿಪತಿಗಳಿಂದ ಅನುಮೋದನೆಗೊಂಡ ವಿನಿಯಮಗಳು /ಪರಿನಿಯಮಗಳು**

**- ಯಾವುದೂ ಇಲ್ಲ –**

**III. ಕುಲಪತಿಗಳು, ಸಿಂಡಿಕೇಟು, ನಿಕಾಯಗಳು ಮತ್ತು ಅಧ್ಯಯನ ಮಂಡಳಿಗಳಿಂದ ಬಂದ ಪ್ರಸ್ತಾವನೆಗಳು:**

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಶೈ.ಮ.ಸಾ.ಸ.1:1 (2026-27) |
| **ವಿಷಯ:** | ಶೈಕ್ಷಣಿಕ ವರ್ಷ 2026-27ನೇ ಸಾಲಿನಲ್ಲಿ ಸ್ವಾಯತ್ತ ಕಾಲೇಜುಗಳಲ್ಲಿ ಪ್ರಾರಂಭಿಸಲು ಉದ್ದೇಶಿಸಿರುವ ಹೊಸ ಕಾರ್ಯಕ್ರಮಗಳು / ಕೋರ್ಸುಗಳು / ಸಹಯೋಗಗಳು ಮತ್ತು ಹೆಚ್ಚುವರಿ ವಿಭಾಗಗಳಿಗೆ ಅನುಮತಿ ನೀಡುವ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಡಿಇವಿ:ಶೈ.ಮ.ಸಾ.ಸ.1:2 (2026-27) |
| **ವಿಷಯ:** | IQAC, ಮಂಗಳೂರು ವಿಶ್ವವಿದ್ಯಾನಿಲಯ ಇದರ ಸ್ಥಾಪನೆ ಹಾಗೂ ಕಾರ್ಯವೈಖರಿಯ ಕರಡು ಪರಿನಿಯಮವನ್ನು ಅನುಮೋದಿಸುವ ಕುರಿತು. |
| **ನಿರ್ಣಯ:** | ಅನುಮೋದಿಸಲಾಯಿತು. |

**ಕಾರ್ಯಸೂಚಿ ಸಂಖ್ಯೆ:** ಆಡಳಿತ:ಶೈ.ಮ.ಸಾ.ಸ.1:3 (2026-27)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ಅಧಿಕಾರಿಗಳ ಆರ್ಥಿಕ / ಆಡಳಿತಾತ್ಮಕ ಅಧಿಕಾರ ಪ್ರತ್ಯಾಯೋಜನೆಯ ಪರಿನಿಯಮದ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ:ಶೈ.ಮ.ಸಾ.ಸ.1:4 (2026-27)

**ವಿಷಯ:** "THE MANGALORE UNIVERSITY EMPLOYEES MEDICAL ATTENDANCE STATUTE (Framed under section 40(o) of K.S.U. Act 2000 in accordance with Karnataka Government Servant's (Medical Attendance) Rules 1963" ಪರಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಶೈ.ಮ.ಸಾ.ಸ.1:5 (2026-27)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ "ಸಂತಕವಿ ಕನಕದಾಸ ನಗದು ಪುರಸ್ಕಾರ" ನಗದು ಬಹುಮಾನ ಪ್ರದಾನ ಮಾಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಶೈ.ಮ.ಸಾ.ಸ.1:6 (2026-27)

**ವಿಷಯ:** 2026-27ನೇ ಸಾಲಿಗೆ ಶೈಕ್ಷಣಿಕ ಮಂಡಳಿ ಸಮಿತಿಯನ್ನು ರಚಿಸುವ ಬಗ್ಗೆ.

**ನಿರ್ಣಯ:** ಶೈಕ್ಷಣಿಕ ಮಂಡಳಿ ಸಮಿತಿಯನ್ನು ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.1:7 (2026-27)

**ವಿಷಯ:** ಸಂತ ಅಲೋಶಿಯಸ್ ಕಾಲೇಜು (ಸ್ವಾಯತ್ತ), ಮಂಗಳೂರು ವಿದ್ಯಾಸಂಸ್ಥೆಗೆ ಶೈಕ್ಷಣಿಕ ವರ್ಷ 2022-23ನೇ ಸಾಲಿನಿಂದ 2023-24ನೇ ಸಾಲಿನವರೆಗೆ ಸ್ವಾಯತ್ತ ಸ್ಥಾನಮಾನವನ್ನು ಮುಂದುವರಿಸಲು ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.1:8 (2026-27)

**ವಿಷಯ:** ಸಂತ ಆಗ್ನೇಸ್ ಕಾಲೇಜು (ಸ್ವಾಯತ್ತ), ಮಂಗಳೂರು ವಿದ್ಯಾಸಂಸ್ಥೆಗೆ ಶೈಕ್ಷಣಿಕ ವರ್ಷ 2022-23ನೇ ಸಾಲಿನಿಂದ 2031-32ನೇ ಸಾಲಿನವರೆಗೆ ಸ್ವಾಯತ್ತ ಸ್ಥಾನಮಾನವನ್ನು ಮುಂದುವರಿಸಲು ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.1:9 (2026-27)

**ವಿಷಯ:** ಸ್ನಾತಕೋತ್ತರ ಕಾರ್ಯಕ್ರಮಗಳ ವಿದ್ಯಾರ್ಥಿ ಪ್ರವೇಶಾರ್ಹತೆ ತಿದ್ದುಪಡಿ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಶೈ.ಮ.ಸಾ.ಸ.1:10 (2026-27)

**ವಿಷಯ:** ಪ್ರೊ. ಬೋಜ ಪೂಜಾರಿ, ಶೈಕ್ಷಣಿಕ ಮಂಡಳಿ ಸದಸ್ಯರು ಸಲ್ಲಿಸಿರುವ ಗೊತ್ತುವಳಿ ಬಗ್ಗೆ.

**ನಿರ್ಣಯ:** ಈ ಕುರಿತು ಸ್ನಾತಕೋತ್ತರ ರಸಾಯನಶಾಸ್ತ್ರ ಹಾಗೂ ಪರಿಸರ ವಿಜ್ಞಾನ ಅಧ್ಯಯನ ಮಂಡಳಿಗಳ ಅಧ್ಯಕ್ಷರುಗಳೊಂದಿಗೆ ಚರ್ಚಿಸಿ ವರದಿ ನೀಡುವಂತೆ ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಡೀನರಿಗೆ ಸೂಚಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಶೈ.ಮ.ಸಾ.ಸ.1:11 (2026-27)

**ವಿಷಯ:** ಮಿಸ್. ಪೃಥ್ವಿ ದೀಕ್ಷಾ, ಶೈಕ್ಷಣಿಕ ಮಂಡಳಿ ಸದಸ್ಯರು ಸಲ್ಲಿಸಿರುವ ಗೊತ್ತುವಳಿ ಬಗ್ಗೆ.

**ನಿರ್ಣಯ:**

1. **Alumni Integrated Student Development Programme:**
   ವಿಶ್ವವಿದ್ಯಾನಿಲಯದಲ್ಲಿ ಹಳೆ ವಿದ್ಯಾರ್ಥಿ ಸಂಘ " Mangalore University Alumni Association (MAA) ಅತ್ಯುತ್ತಮ ಕೆಲಸ ಮಾಡುತ್ತಿದ್ದು , ಇದನ್ನು ಇನ್ನಷ್ಟು ಬಲಪಡಿಸುವ ನಿಟ್ಟಿನಲ್ಲಿ ಪ್ರತಿಯೊಂದು ವಿಭಾಗವು ತಮ್ಮ ವಿಭಾಗದ ಹಳೆ ವಿದ್ಯಾರ್ಥಿಗಳನ್ನು ಸಂಪರ್ಕಿಸಿ , ಅವರ ನೊಂದಣಿ ಮಾಡಿಕೊಳ್ಳುವುದರೊಂದಿಗೆ ವಿಭಾಗದ ಹಳೆ ವಿದ್ಯಾರ್ಥಿಗಳ ಸಹಕಾರವನ್ನು ಪಡೆದು ವಿಭಾಗದ ಶೈಕ್ಷಣಿಕ ಹಾಗೂ ಸಂಶೋಧನಾತ್ಮಕ ಚಟುವಟಿಕೆಗಳಿಗೆ

ಮತ್ತು ವಿಭಾಗದ ಬಡವಿದ್ಯಾರ್ಥಿಗಳಿಗೆ ಅಗ ತ್ಯವಿರುವ ಆರ್ಥಿಕ ನೆರವು ನೀಡುವ ಯೋಜನೆಯನ್ನು ರೂಪಿಸುವಂತೆ ಎಲ್ಲಾ ವಿಭಾಗಗಳ ಅಧ್ಯಕ್ಷರಿಗೂ ಸೂಚಿಸಲು ನಿರ್ಣಯಿಸಲಾಯಿತು.

2. **Research Excellence Support Programme/Academic Research Excellence Initiative for SC/ST Scholars:**

ರಾಜ್ಯ ಸರ್ಕಾರದಿಂದ ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಸಂಬಂಧಿಸಿದ ಯೋಜನೆಯನ್ನು ಸರ್ಕಾರವು ನೇರವಾಗಿ DBT ಮೂಲಕ ಪಾವತಿಸುತ್ತಿದ್ದು, ಮುಂದಿನ ದಿನಗಳಲ್ಲಿ ಸರ್ಕಾರವು SCSP/TSP ವಿಶೇಷ ಪ್ಯಾಕೇಜ್ ನೀಡಿದ ಸಂದರ್ಭದಲ್ಲಿ ಈ ಬಗ್ಗೆ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಲಾಯಿತು . ವಿದ್ಯಾರ್ಥಿ ಪ್ರತಿನಿಧಿ ಸದಸ್ಯರ ಕಾಳಜಿಯನ್ನು ಪ್ರಶಂಸಿಸುತ್ತಾ, SCSP/TSP ವಿಶೇಷ ಅನುದಾನಕ್ಕಾಗಿ ಸರ್ಕಾರಕ್ಕೆ ಮನವಿ ಸಲ್ಲಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.1:12 (2026-27)

**ವಿಷಯ:** ಸ್ನಾತಕೋತ್ತರ ಕಾರ್ಯಕ್ರಮಗಳ ಪರಿಷ್ಕೃತ ಪಠ್ಯಕ್ರಮಗಳ ಅನುಮೋದನೆ ಬಗ್ಗೆ.

**ನಿರ್ಣಯ:** ಕೆಲವೊಂದು ಸ್ನಾತಕೋತ್ತರ ಕಾರ್ಯಕ್ರಮಗಳ ಅಧ್ಯಯನ ಮಂಡಳಿಗ ಳ ಅಧ್ಯಕ್ಷರುಗಳಿಗೆ ಸೂಚಿಸಿದ ತಿದ್ದುಪಡಿಗಳೊಂದಿಗೆ ಸಂಬಂಧಿ ಸಿದ ನಿಕಾಯಗಳ ಡೀನರ ಅನುಮೋದನೆ ಪಡೆದು ಸಲ್ಲಿಸುವ ಷರತ್ತಿನ ಮೇರೆಗೆ ಪರಿಷ್ಕೃತ ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.1:13 (2026-27)

**ವಿಷಯ:** ಶೈಕ್ಷಣಿಕ ವರ್ಷ 2026-27 ನೇ ಸಾಲಿನಲ್ಲಿ ಕೆನರಾ ಕಾಲೇಜು (ಸ್ವಾಯತ್ತ), ಮಂಗಳೂರು ವಿದ್ಯಾಸಂಸ್ಥೆಯಲ್ಲಿ ಪ್ರಾರಂಭಿಸಲು ಉದ್ದೇಶಿಸಿರುವ ಹೊಸ ಕಾರ್ಯಕ್ರಮಗಳಿಗೆ ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಶೈ.ಮ.ಸಾ.ಸ.1:14 (2026-27) |
| **ವಿಷಯ:** | ರಾಜ್ಯ ಶಿಕ್ಷಣ ನೀತಿ ಆಯೋಗದ ಮಾರ್ಗಸೂಚಿಯನ್ವಯ ತಯಾರಿಸಿರುವ ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ವ್ಯಾಪ್ತಿಯಡಿ ಬರುವ ಪದವಿ ಕಾರ್ಯಕ್ರಮಗಳ ಪಠ್ಯಕ್ರಮಗಳ ಅನುಮೋದನೆ ಬಗ್ಗೆ. |

**ನಿರ್ಣಯ:**

| | |
|---|---|
| 1. .B.Sc. (Food Technology V-VI<br>2. B.Sc.(Food Nutrition and Dietetics V-VI) | ಅನುಮೋದಿಸಲಾಯಿತು. ಮುಂದಿನ ದಿನಗಳಲ್ಲಿ ಆಹಾರ ಉತ್ಪಾದನೆಯ ಬಗ್ಗೆ WHOನ ಇತ್ತೀಚೆಗಿನ ವರದಿಯಲ್ಲಿ ಉಲ್ಲೇಖಿಸಲಾದ ವಿಷಯಗಳ ಗಂಭೀರತೆಯನ್ನು ವಿದ್ಯಾರ್ಥಿಗಳಿಗೆ ತಿಳಿಸುವ ಬಗ್ಗೆ ಅಧ್ಯಯನ ಮಂಡಳಿಯಲ್ಲಿ ಚರ್ಚಿಸಿ ಪಠ್ಯಕ್ರಮದಲ್ಲಿ ಅಳವಡಿಸಿಕೊಳ್ಳಲು ಸಲಹೆ ನೀಡಲಾಯಿತು. |
| 3 .B.Sc.(Animation & Visual Effects V-VI) | ಅನುಮೋದಿಸಲಾಯಿತು. |
| 4. B.CA (V-VI) | ಅನುಮೋದಿಸಲಾಯಿತು. |
| 5. BCA (Data Analytics V-VI) | ಅನುಮೋದಿಸಲಾಯಿತು. |
| 6. BCA (Artificial Intelligence & Machine Learning) V-VI | ಅನುಮೋದಿಸಲಾಯಿತು. |
| 7. B.Sc. (Fashion Design) V-VI | ಅನುಮೋದಿಸಲಾಯಿತು. |
| 8. Computer Science (V-VI ) | ಅನುಮೋದಿಸಲಾಯಿತು. |
| 9. Biotechnology (V-VI) | ಅನುಮೋದಿಸಲಾಯಿತು. |
| 10. Microbiology (V-VI) | ಅನುಮೋದಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಶೈ.ಮ.ಸಾ.ಸ.1:15 (2026-27) |
| **ವಿಷಯ:** | ರಾಜ್ಯ ಶಿಕ್ಷಣ ನೀತಿ ಆಯೋಗದ ಮಾರ್ಗಸೂಚಿಯನ್ವಯ ತಯಾರಿಸಿರುವ ವಾಣಿಜ್ಯ ನಿಕಾಯದ ವ್ಯಾಪ್ತಿಯಡಿ ಬರುವ ಪದವಿ ಕಾರ್ಯಕ್ರಮಗಳ ಪಠ್ಯಕ್ರಮಗಳ ಅನುಮೋದನೆ ಬಗ್ಗೆ. |

| ನಿರ್ಣಯ: | | |
|---|---|---|
| | 1. B.Com (V-VI Sem) | ಅನುಮೋದಿಸಲಾಯಿತು. |
| | 2. B.Com (Voc) (Office Management & Secretarial Practice) (V-VI Sem) | ಅನುಮೋದಿಸಲಾಯಿತು. |
| | 3. B.Com (Voc) (Tax Procedure & Practice ) (V-VI Sem) | ಅನುಮೋದಿಸಲಾಯಿತು. |
| | 4. B.Com (Voc) (Computer Application) (V-VI Sem) | ಅನುಮೋದಿಸಲಾಯಿತು. |
| | 5. B.Com (Voc) (Accounting & Finance) (V-VI Sem) | ಅನುಮೋದಿಸಲಾಯಿತು. |
| | 6. B.Com (Business Data Analytics) (V-VI Sem) | ಅನುಮೋದಿಸಲಾಯಿತು. |
| | 7. B.Com (Business Data Analytics) (III-IV Sem) (Revised) | ಅನುಮೋದಿಸಲಾಯಿತು. |
| | 8. B.Com (Voc) (Tax Procedure & Practice) (III-IV Sem) Revised | ಅನುಮೋದಿಸಲಾಯಿತು. |
| | 9. B.Com (Voc) (Office Management & Secretarial Practice) (III–IV Sem) Revised | ಅನುಮೋದಿಸಲಾಯಿತು. |
| | 10. B.Com (Voc) Computer Applications) (III-IV Sem) (Revised) | ಅನುಮೋದಿಸಲಾಯಿತು. |
| | 11. AEDP Programme – B.Com in Banking Financial Services and Insurance (III-IV Sem) (Revised) | ಅನುಮೋದಿಸಲಾಯಿತು. |
| | 12. AEDP Programme – B.Com in Banking Financial Services and Insurance – (I – II Sem) (Revised) | ಅನುಮೋದಿಸಲಾಯಿತು. |
| | 13. B.Com (Voc) (Accounting & Finance) (III-IV Sem) Revised | ಅನುಮೋದಿಸಲಾಯಿತು. |
| | 14. AEDP Programme – B.Com in Retail Operations – III-IV Sem | ಅನುಮೋದಿಸಲಾಯಿತು. |
| | 15. AEDP Programme – B.Com in Retail Operations – (I-II Sem) (Revised) | ಅನುಮೋದಿಸಲಾಯಿತು. |

| | |
|---|---|
| 16. B.Com (I-II Sem) (Revised) | ಅನುಮೋದಿಸಲಾಯಿತು. |
| 17. B.Com (III-IV Sem) (Revised) | ಅನುಮೋದಿಸಲಾಯಿತು. |
| 18. B.Com (Voc) (Accounting & Finance) (I-II Sem) Revised | ಅನುಮೋದಿಸಲಾಯಿತು. |
| 19. BBA Logistics (V-VI Sem) | ಅನುಮೋದಿಸಲಾಯಿತು. |

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.1:16 (2026-27)

**ವಿಷಯ:** ರಾಜ್ಯ ಶಿಕ್ಷಣ ನೀತಿ ಆಯೋಗದ ಮಾರ್ಗಸೂಚಿಯನ್ವಯ ತಯಾರಿಸಿರುವ ಕಲಾ ನಿಕಾಯದ ವ್ಯಾಪ್ತಿಯಡಿ ಬರುವ ಪದವಿ ಕಾರ್ಯಕ್ರಮಗಳ ಪಠ್ಯಕ್ರಮಗಳ ಅನುಮೋದನೆ ಬಗ್ಗೆ.

**ನಿರ್ಣಯ**

| | |
|---|---|
| 1. BVA-(V-VI sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 2. BSW-(V-VI sem) | |

**ಬಿ.ಎ. ಪದವಿ ಕಾರ್ಯಕ್ರಮದ ಕೋರ್ ಕೋರ್ಸುಗಳು /ಭಾಷಾ ವಿಷಯಗಳು**

| | |
|---|---|
| 3. Economics (V–VI Sem) | |
| 4.<br>i).Kannada (Language)/ (optional)-(I-II Sem)-Revised<br>ii) Kannada (optional) V – VI Sem Functional Kannada | ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು. |
| 5. History-(V-VI sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 6. Ancient History and Archaeology-(V-VI sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 7. Journalism- (V-VI sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 8. Sociology-(V-VI sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 9. B.A. Home Science-(V-VI sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 10. Sanskrit (Core Course) – (V-VI Sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು |

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.1:17 (2026-27)

**ವಿಷಯ:** ಸ್ನಾತಕೋತ್ತರ ವಿಭಾಗಗಳ ಏಕರೂಪದ ಪಠ್ಯಕ್ರಮಗಳಿಗೆ ಸಂಬಂಧಿಸಿದ ಮಾರ್ಗಸೂಚಿ ಮತ್ತು ಪಠ್ಯಕ್ರಮಗಳ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.1:18 (2026-27)

**ವಿಷಯ:** ಪರಿಸರ ಅಧ್ಯಯನ ವಿಷಯವನ್ನು ಬೋಧಿಸುವ ಉಪನ್ಯಾಸಕರ ವಿದ್ಯಾರ್ಹತೆಯನ್ನು ನಿಗದಿಪಡಿಸುವ ಬಗ್ಗೆ.

**ನಿರ್ಣಯ:** ಈ ಕುರಿತು ಸ್ನಾತಕೋತ್ತರ ರಸಾಯನಶಾಸ್ತ್ರ ಹಾಗೂ ಪರಿಸರ ವಿಜ್ಞಾನ ಅಧ್ಯಯನ ಮಂಡಳಿಗಳ ಅಧ್ಯಕ್ಷರುಗಳೊಂದಿಗೆ ಚರ್ಚಿಸಿ ವ ರದಿ ನೀಡುವಂತೆ ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಡೀನರಿಗೆ ಸೂಚಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ:ಶೈ.ಮ.ಸಾ.ಸ.1:19 (2026-27)

**ವಿಷಯ:** ಶೈಕ್ಷಣಿಕ ವರ್ಷ 2026-27ನೇ ಸಾಲಿಗೆ ಸರಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಹೊಸ ಕಾರ್ಯಕ್ರಮಗಳು / ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿ / ಕಾರ್ಯಕ್ರಮ ಮುಚ್ಚುವಿಕೆ ಬಗ್ಗೆ.

**ನಿರ್ಣಯ:** ಸರಕಾರಿ ಪ್ರಥಮ ದರ್ಜೆ ಕಾಲೇಜುಗಳ ಹೊಸ ಕಾರ್ಯಕ್ರಮಗಳು / ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿ / ಕಾರ್ಯಕ್ರಮ ಮುಚ್ಚುವಿಕೆ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು. ಮುಂದುವರಿದು B.Com (Human Resource Operations AEDP) ಕಾರ್ಯಕ್ರಮದ ಪಠ್ಯಕ್ರಮವು ಸರ್ಕಾರದಿಂದ ಸ್ವೀಕೃತವಾದ ಬಳಿಕ ಡೀನರ ಅನುಮೋದನೆ ಪಡೆದು ಜಾರಿಗೊಳಿಸಲು ನಿರ್ಣಯಿಸಲಾಯಿತು.

**ಇತರ ವಿಷಯಗಳು:**

1. ಸರ್ಕಾರ ಅನುಮೋದನೆ ಇಲ್ಲದೆ ಪ್ರಾರಂಭಿಸಿರುವ ನಾಲ್ಕು ಘಟಕ ಕಾಲೇಜುಗಳನ್ನು ಸಮೀಪದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳೊಂದಿಗೆ ವಿಲೀನ ಮಾಡುವ ಪ್ರಸ್ತಾವನೆಯ ಸ್ಥಿತಿಗತಿಯ ಬಗ್ಗೆ ಕಾಲೇಜು ಶಿಕ್ಷಣ ಇಲಾಖೆಯ ಜಂಟಿ ನಿರ್ದೇಶಕರಲ್ಲಿ ಮಾಹಿತಿ ಪಡೆಯಲಾಯಿ ತು. ಈ ವಿಷಯದಲ್ಲಿ ವಿಶ್ವವಿದ್ಯಾನಿಲಯಕ್ಕೆ ಅನುಕೂಲ ಮಾಡಿಕೊಡುವಂತೆ ಕಾಲೇಜು ಶಿಕ್ಷಣ ಇಲಾಖೆಯ ಜಂಟಿ ನಿರ್ದೇಶಕರಲ್ಲಿ ಕೋರಲಾಯಿತು.

2. ವಿಭಾಗಗಳ ಪ್ರಯೋಗಾಲಯಗಳಲ್ಲಿರುವ ಅನುಪಯುಕ್ತ ವಸ್ತುಗಳನ್ನು ವಿಶ್ವವಿದ್ಯಾನಿಲಯದ

ನಿಯಮಾನುಸಾರ ವಿಲೇ ಮಾಡುವಂತೆ ಎಲ್ಲಾ ವಿಭಾಗಗಳ ಮುಖ್ಯಸ್ಥರಿಗೆ ಸೂಚಿಸಲಾಯಿತು .

3. ಎಲ್.ಎಮ್.ಎಸ್. ನೆರವಿನಿಂದ ಹಿರಿಯ ವಿಷಯ ತಜ್ಞರ ಮೂಲಕ ಒಪನ್ ಎಲೆಕ್ಟೀವ್ ಕೋರ್ಸ್ಗಳ ಉಪನ್ಯಾಸವನ್ನು ಆನ್ ಲೈನ್ ಕ್ಲಾಸ್ ನಡೆಸುವ ಬಗೆಗಿನ ಪ್ರಸ್ತಾವನೆಯನ್ನು ಪರಿಶೀಲಿಸಲು ನಿರ್ಣಯಿಸಲಾಯಿತು.

ಕೊನೆಯದಾಗಿ, ಕುಲಸಚಿವರು ಸದಸ್ಯರುಗಳ ಸಲಹೆ ಸಹಕಾರಗಳಿಗೆ ಹಾಗೂ ಆನ್ ಲೈನ್ ನಲ್ಲಿ ಭಾಗವಹಿಸಿದ ಮಾಧ್ಯಮ ಪ್ರತಿನಿಧಿಗಳು ಸೇರಿದಂತೆ ಎಲ್ಲರಿಗೂ ಧನ್ಯವಾದಗಳನ್ನು ಅರ್ಪಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| **ಸಹಿ/-** | **ಸಹಿ/-** |
| **ಕುಲಸಚಿವರು** | **ಕುಲಪತಿಗಳು.** |